ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 668

ಉತ್ತರಿಸಬೇಕಾದ ದಿನಾಂಕ : 25.09.2020

ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ	ನಗರದ ಯುವಕರಲ್ಲಿ ಕ್ರೀಡಾ ಮನೋಭಾವವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕ್ರೀಡಾ ಇಲಾಖೆಯಿಂದ ರೂಪಿಸಿರುವ ಕಾರ್ಯಕ್ರಮಗಳಾವುವು;	ನಗರ ಪ್ರದೇಶದ ಯುವಕರು ಸೇರಿದಂತೆ ಯುವಜನರಲ್ಲಿ ಕ್ರೀಡಾ ಮನೋಭಾವ ಹೆಚ್ಚಿಸುವ ನಿಟ್ಟಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರೂಪಿಸಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಿದೆ.
ಆ	ಯಾವ ಯಾವ ಕ್ರೀಡೆಗಳಿಗೆ ತರಬೇತುದಾರರ ಮೂಲಕ ತರಬೇತಿ ನೀಡಲಾಗುತ್ತಿದೆ; ತರಬೇತಿ ಸ್ಥಳಗಳಾವುವು;	ಅಥ್ಲೆಟಿಕ್ಸ್, ವಾಲಿಬಾಲ್, ಕುಸ್ತಿ, ಹಾಕಿ, ಫುಟ್ಬಾಲ್, ಬಾಸ್ಕೆಟ್‌ಬಾಲ್, ಖೋ-ಖೋ, ಕಬಡ್ಡಿ, ಬಿಲ್ಲುಗಾರಿಕೆ (ಆರ್ಚರಿ), ಕತ್ತಿವರಸೆ (ಫೆನ್ಸಿಂಗ್), ಜೂಡೋ, ಸೈಕ್ಲಿಂಗ್, ವೇಯ್‌ಟ್‌ಲಿಫ್ಟಿಂಗ್, ಈಜು, ಬಾಕ್ಸಿಂಗ್, ಬ್ಯಾಡ್ಮಿಂಟನ್, ಲಾನ್ ಟೆನ್ನಿಸ್, ಕ್ರಿಕೆಟ್, ಮತ್ತು ಜಿಮ್ನಾಸ್ಟಿಕ್ಸ್ ಕ್ರೀಡೆಗಳಲ್ಲಿ ತರಬೇತುದಾರರ ಮೂಲಕ ತರಬೇತಿ ನೀಡಲಾಗುತ್ತಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಜ್ಯ ಮಟ್ಟದ ಕ್ರೀಡಾಂಗಣಗಳು, ಜಿಲ್ಲಾ ಮತ್ತು ತಾಲ್ಲೂಕು ಕ್ರೀಡಾಂಗಣಗಳಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಅಲ್ಲದೇ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಪ್ರವೇಶ ಪಡೆದ ಕ್ರೀಡಾಪಟುಗಳಿಗೆ ಆಯಾ ಕ್ರೀಡೆಗಳಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ.
ಇ	ಯಾವ ಯಾವ ಕ್ರೀಡೆಗಳಿಗೆ ತರಬೇತಿ ಹೊಂದಲು ಯಾವ ಅರ್ಹತೆಗಳನ್ನು ನಿಗದಿಪಡಿಸಲಾಗಿದೆ?	ದೈಹಿಕ ಕ್ಷಮತೆ ಹಾಗೂ ಆಯಾ ಕ್ರೀಡೆಗಳಿಗೆ ಅಗತ್ಯವಾದ ಕೌಶಲ್ಯಗಳನ್ನು ಹೊಂದಿರುವುದನ್ನು ಆಧರಿಸಿ, ಯುವಜನರಿಗೆ ವಿವಿಧ ಕ್ರೀಡೆಗಳಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ.

ವೈಎಸ್ ಡಿ-/ಇಬಿಬಿ/96/2020

(ಸಿ. ಟಿ. ರವಿ)

ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ
ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಅನುಬಂಧ-1

ಯುವಜನರಲ್ಲಿ ಕ್ರೀಡಾಸಕ್ತಿಯನ್ನು ಹೆಚ್ಚಿಸಲು ಹಾಗೂ ಕ್ರೀಡೆಗಳಲ್ಲಿ ಭಾಗವಹಿಸಲು ಉತ್ತೇಜಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರಮುಖ ಕಾರ್ಯಕ್ರಮಗಳ ವಿವರ

1. **ಕ್ರೀಡಾ ಮೂಲಸೌಕರ್ಯಗಳ ಸೃಜನೆ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿವೇಶನಗಳಲ್ಲಿ ಕ್ರಿಡಾ ಮೂಲಸೌಕರ್ಯಗಳನ್ನು ಸೃಜಿಸುವ ಮೂಲಕ ಕ್ರೀಡಾಪಟುಗಳ ಕ್ರೀಡಾ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊರತುಪಡಿಸಿ, 29 ಜಿಲ್ಲಾ ಕೇಂದ್ರಗಳು ಹಾಗೂ 121 ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ರಾಜ್ಯದ 29 ಸ್ಥಳಗಳಲ್ಲಿ ಈಜುಕೊಳಗಳು ಹಾಗೂ 44 ಸ್ಥಳಗಳಲ್ಲಿ ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಅಲ್ಲದೇ, ರಾಜ್ಯದ 14 ಸ್ಥಳಗಳಲ್ಲಿ ಆಧುನಿಕ ಸಿಂಥೆಟಿಕ್ ಅಥ್ಲೆಟಿಕ್ಸ್ ಟ್ರ್ಯಾಕ್‌ಗಳು ಹಾಗೂ 04 ಸ್ಥಳಗಳಲ್ಲಿ ಹಾಕಿ ಟರ್ಫ್‌ಗಳನ್ನು ಅಳವಡಿಸಲಾಗಿದೆ.
2. **ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಂಡಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

ಕ್ರ ಸಂ	ವಿವರ	ಚಿನ್ನ (ರೂ ಲಕ್ಷಗಳಲ್ಲಿ)	ಬೆಳ್ಳಿ (ರೂ ಲಕ್ಷಗಳಲ್ಲಿ)	ಕಂಚು (ರೂ ಲಕ್ಷಗಳಲ್ಲಿ)
1	ಒಲಂಪಿಕ್ಸ್	500.00	300.00	200.00
2	ಏಷಿಯನ್ ಗೇಮ್ಸ್	25.00	15.00	8.00
3	ಕಾಮನ್ ವೆಲ್ತ್ ಗೇಮ್ಸ್	25.00	15.00	8.00
4	ವಲ್ಡ್ ಕಪ್/ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು)	5.00	3.00	2.00
5	ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು)	5.00	3.00	2.00
6	ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ)	2.00	1.00	0.50
7	ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ)	0.50	0.25	0.15
8	ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ)	0.25	0.15	0.10

3. **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
4. **ಜೀವಮಾನ ಸಾಧನೆ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುವುದು.
5. **ಕ್ರೀಡಾ ಪೋಷಕ ಪ್ರಶಸ್ತಿ:** ಕ್ರೀಡೆಯ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಖಾಸಗಿ ಸಂಘ-ಸಂಸ್ಥೆಗಳಿಗೆ ಉತ್ತೇಜನ ನೀಡಲು ಕ್ರೀಡಾ ಪೋಷಕ ಪ್ರಶಸ್ತಿ ನೀಡಲಾಗುತ್ತಿದೆ.
6. **ಶೈಕ್ಷಣಿಕ ಶುಲ್ಕ ಮರುಪಾವತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.
7. **ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯ ಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
8. **ಮಾಸಾಶನ:** 50 ವರ್ಷ ವಯೋಮಾನ ಮೀರಿದ ಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಕ್ರೀಡಾಪಟುಗಳಿಗೆ ಮಾಸಾಶನವನ್ನು ಕೆಳಕಂಡಿಸಿದಂತೆ ನೀಡಲಾಗುತ್ತಿದೆ.

ವಿವರ	ಮಾಜಿ ಕುಸ್ತಿ ಪೈಲ್ವಾನರುಗಳಿಗೆ ನೀಡಲಾಗುತ್ತಿರುವ ಮಾಸಾಶನದ ವಿವರ	ಕುಸ್ತಿಯೇತರ ಮಾಜಿ ಕ್ರೀಡಾಪಟುಗಳಿಗೆ ನೀಡಲಾಗುತ್ತಿರುವ ಮಾಸಾಶನದ ವಿವರ
ರಾಜ್ಯ ಮಟ್ಟ	ರೂ 2,500/-	ರೂ 1,000/-
ರಾಷ್ಟ್ರಮಟ್ಟ	ರೂ 3,000/-	ರೂ 1,500/-
ಅಂತರ-ರಾಷ್ಟ್ರೀಯ ಮಟ್ಟ	ರೂ 4,000/-	ರೂ 2,000/-

9. **'ಯುವ ಚೈತನ್ಯ':** ಯುವ ಸಂಘಗಳಿಗೆ 'ಯುವ ಚೈತನ್ಯ' ಕಾರ್ಯಕ್ರಮದಡಿ ಕ್ರೀಡಾ ಕಿಟ್ ಗಳನ್ನು ವಿತರಿಸಲಾಗುತ್ತಿದೆ.
10. ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ ವಿತರಿಸಲಾಗುತ್ತಿದೆ. ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ 5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.
11. ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.
12. **ಗರಡಿ ಮನೆ ನಿರ್ಮಾಣ:** ಕುಸ್ತಿ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ಸಲುವಾಗಿ ಗರಡಿ ಮನೆ ನಿರ್ಮಾಣ ಮತ್ತು ನವೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ.
13. **ನಮ್ಮೂರ ಶಾಲೆಗೆ ನಮ್ಮ ಯುವಜನರು:** ಈ ಕಾರ್ಯಕ್ರಮದಡಿ ಕ್ರೀಡಾ ಕ್ಷೇತ್ರದಡಿ ಸಾಧನೆ ಮಾಡಿದ ಸರಕಾರಿ ಶಾಲೆಗಳು ಕ್ರೀಡಾ ಚಟುವಟಿಕೆಗಳ ಪ್ರೋತ್ಸಾಹಕ್ಕಾಗಿ ಕ್ರೀಡಾ ಸಾಮಗ್ರಿಗಳನ್ನು ಪೂರೈಸಿಕೊಳ್ಳಲು ಪ್ರೋತ್ಸಾಹಧನ ಮತ್ತು ದೈಹಿಕ ಶಿಕ್ಷಕರ ಗೌರವಧನ ನೀಡಲಾಗುವುದು.
14. **ಯುವ ಶಕ್ತಿ ಕೇಂದ್ರ :** ಯುವಜನರ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಲು ಇಲಾಖಾ ಕ್ರೀಡಾಂಗಣಗಳು, ಕ್ರೀಡಾ ವಸತಿ ನಿಲಯಗಳು ಮತ್ತು ಸರ್ಕಾರಿ ಕಾಲೇಜುಗಳಿಗೆ ಜಿಮ್ ಉಪಕರಣಗಳನ್ನು ಒದಗಿಸಲಾಗುವುದು.
15. **ಯುವಜನ ಮೇಳ :** ಯುವಜನರು ಜಾನಪದ ಕಲೆಯನ್ನು ಉಳಿಸಿ, ಬೆಳೆಸಲು ಪೂರಕವಾಗುವಂತೆ 17 ವಿವಿಧ ಪ್ರಕಾರಗಳ ಜನಪದ ಸ್ಪರ್ಧೆಗಳನ್ನು ಜಿಲ್ಲಾ, ವಿಭಾಗ ಮತ್ತು ರಾಜ್ಯ ಮಟ್ಟದಲ್ಲಿ ಆಯೋಜಿಸುವುದು.
16. **ಯುವಜನೋತ್ಸವ:** ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಿ, ರಾಜ್ಯ ಮಟ್ಟದ ವಿಜೇತರನ್ನು ಸ್ವಾಮಿ ವಿವೇಕಾನಂದರ ಜನ್ಮದಿನೋತ್ಸವದ ಅಂಗವಾಗಿ ನಡೆಯುವ ರಾಷ್ಟ್ರೀಯ ಯುವಜನೋತ್ಸವಕ್ಕೆ ನಿಯೋಜಿಸುವುದು.
17. **ಯುವಜನ ಸಮ್ಮೇಳನ, ಕಾರ್ಯಾಗಾರ ಮತ್ತು ತರಬೇತಿ :** ಯುವಜನರಿಗಾಗಿ ಜನಪದ ಕಲೆಗಳು, ಸಾಂಸ್ಕೃತಿಕ ಸ್ಪರ್ಧೆಗಳ ಬಗ್ಗೆ ಹೆಚ್ಚಿನ ತರಬೇತಿ ನೀಡಲು ಯುವಜನ ಸಮ್ಮೇಳನ, ಕಾರ್ಯಾಗಾರ ಮತ್ತು ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ.
18. **'ಯುವ ಸ್ಪಂದನ' ಕಾರ್ಯಕ್ರಮ:** ನಿಮ್ಹಾನ್ಸ್ ಸಂಸ್ಥೆಯ ಸಹಯೋಗದೊಂದಿಗೆ ಯುವಜನರ ಮಾನಸಿಕ ಆರೋಗ್ಯ ಸಂಬಂಧಿತ ವಿಷಯಗಳ ಕುರಿತು ಜಾಗೃತಿ ಕಾರ್ಯಕ್ರಮಗಳು ಹಾಗೂ ಆಪ್ತ ಸಮಾಲೋಚನಾ ಸೌಲಭ್ಯವನ್ನು ಒದಗಿಸಲಾಗುತ್ತಿದೆ.
19. ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.
20. ಯುವಜನರಿಗೆ ಸಾಹಸ ಕ್ರೀಡಾ ಪ್ರಶಿಕ್ಷಕರಾಗಲು ವಿವಿಧ ಹಂತಗಳ ತರಬೇತಿಯನ್ನು ನೀಡಲಾಗುತ್ತಿದೆ.
21. ರಾಷ್ಟ್ರೀಯ ಸೇವಾ ಯೋಜನೆ ಮೂಲಕ ನಿಮ್ಹಾನ್ಸ್ ಸಂಸ್ಥೆಯ ಸಹಯೋಗದೊಂದಿಗೆ ಜೀವನ ಕೌಶಲ್ಯ ತರಬೇತಿಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.